ಕೆ. ಯಾಲಕ್ಕಿಗೌಡ
ನಿರ್ದೇಶಕರು, (ಪಂಚಾಯತ್ ರಾಜ್)
K. YALAKKI GOWDA
Director, (Panchayat Raj)

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ. ಪತ್ರ ಸಂಖ್ಯೆ: ಗ್ರಾಅಪ 266 ಗ್ರಾಪಂಕಾ 2014

ದಿನಾಂಕ: 17-06-2014

ಮಾನ್ಯರೆ,

ವಿಷಯ: ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ 1750 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರ ಸಂಖ್ಯೆ: ಇ(3) 131/14-15/PSC ದಿನಾಂಕ:10-06-2014

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ 1750 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಪಟ್ಟಿಯನ್ನು ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಉಲ್ಲೇಖಿತ ಪತ್ರದಲ್ಲಿ ಕರ್ನಾಟಕ ಲೋಕ ಸೇವಾ ಆಯೋಗವು ಸಹ ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಕಳುಹಿಸಲು ಕ್ರಮ ವಹಿಸಿದೆ. ಈ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977 ರ ಅನುಸಾರ ಜರೂರಾಗಿ ನೇಮಕಾತಿ ಆದೇಶ ಹೊರಡಿಸಬೇಕಾಗಿರುತ್ತದೆ.

ಅಂತಿಮ ಆಯ್ಕೆ ಪಟ್ಟಿಯಲ್ಲಿ ವಿವಿಧ ಮೀಸಲಾತಿಯಡಿ ಆಯ್ಕೆ ಹೊಂದಿರುವ ಹಾಗೂ ಸದರಿ ಮೀಸಲಾತಿಯಿಂದ ರಿಯಾಯಿತಿ ಹೊಂದಿರುವ ಅಭ್ಯರ್ಥಿಗಳು ಸಲ್ಲಿಸಿರುವ ಪ್ರಮಾಣ ಪತ್ರಗಳು ಸಿಂಧುವೆ ಎಂಬ ಬಗ್ಗೆ ಸರ್ಕಾರಿ ಅಧಿಸೂಚನೆ ಸಂಖ್ಯೆ: SWL 247 SAD 90, ದಿನಾಂಕ:22-02-1993 ರಲ್ಲಿ ಹೊರಡಿಸಿರುವ ಕರ್ನಾಟಕ ಪ.ಜಾ. /ಪ.ಪಂ. ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಇತ್ಯಾದಿಗಳ ಮೀಸಲಾತಿ) ನಿಯಮ 1992 ರನ್ವಯ ಸಂಬಂಧಪಟ್ಟ ಪ್ರಾಧಿಕಾರದಿಂದ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆದ ನಂತರವೇ ಅಭ್ಯರ್ಥಿಗಳನ್ನು ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಬೇಕಾಗಿರುತ್ತದೆ.

ಆದುದರಿಂದ ಅಭ್ಯರ್ಥಿಗಳು ತಮ್ಮ ಅರ್ಹತೆಗಾಗಿ ಮತ್ತು ಮೀಸಲಾತಿಗಾಗಿ ಸಲ್ಲಿಸಿರುವ ದಾಖಲೆಗಳ ಸಿಂಧುತ್ವ ಪ್ರಮಾಣ ಪತ್ರಗಳನ್ನು ತ್ವರಿತವಾಗಿ ನೀಡಲು ಕ್ರಮ ವಹಿಸುವಂತೆ ಕೋರಿದೆ.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,

17/6/14

ಎಲ್ಲಾ ಜಿಲ್ಲೆಗಳ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು

ಬಹುಮಹಡಿ ಕಟ್ಟಡ, 3ನೇ ಮಹಡಿ, ಬೆಂಗಳೂರು – 560 001 M.S. Building, 3rd Floor, Bangalore - 560 001
Tele: 080-2235 3925 / 2203 2533 Fax : 080-2235 3925 e-mail : pr.kar@nic.in